**pAll India Radio: Bangalore**
**Regional Bulletin In Kannada**
**10.04.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ರಾಜ್ಯದಲ್ಲಿ ೨ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ; ತಜ್ಞರ ತಂಡದಿಂದ ಅಧ್ಯಯನ

೨. ತುಮಕೂರಿನ ನಿಟ್ಟೂರಿನಲ್ಲಿ ರೈಲ್ವೆ ಮೇಲ್ಸೇತುವೆ ನಿರ್ಮಾಣ ಕಾಮಗಾರಿಗೆ ಸಚಿವ ವಿ.ಸೋಮಣ್ಣ ಚಾಲನೆ

೩. ಕೇಂದ್ರ ಸರ್ಕಾರದ ವಿರುದ್ಧ ಇದೇ ೧೭ ರಂದು ಕಾಂಗ್ರೆಸ್ ಜನಾಕ್ರೋಶ ಯಾತ್ರೆ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೪. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು- ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

೫. ಕರಾವಳಿ ಸೇರಿದಂತೆ ರಾಜ್ಯದ ಹಲವೆಡೆ ಗುಡುಗು ಸಹಿತ ಮಳೆ ಸಂಭವ - ಹವಾಮಾನ ಇಲಾಖೆ ಮುನ್ಸೂಚನೆ

****************

ರಾಜ್ಯದಲ್ಲಿ ೨ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಗೆ ಸಂಬಂಧಪಟ್ಟಂತೆ ಕೇಂದ್ರದ ತಜ್ಞರ ತಂಡ ರಾಜ್ಯದಲ್ಲಿ ಅಧ್ಯಯನ ನಡೆಸುತ್ತಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ.

ವರದಿಯ ಬಳಿಕ ರಾಜ್ಯ ಸರ್ಕಾರ ವಿಸ್ತೃತ ಯೋಜನಾ ವರದಿ ಹಾಗೂ ಕಾರ್ಯ ಸಾಧುತ್ವ ಕುರಿತು ಪರಿಶೀಲನೆಗೆ ಮತ್ತೊಂದು ತಜ್ಞರ ಸಮಿತಿಯನ್ನು ರಚಿಸಲಿದೆ ಎಂದು ತಿಳಿಸಿದ್ದಾರೆ. ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸ್ಥಳ ಕುರಿತು ಚರ್ಚೆಗಳಾಗುತ್ತಿದ್ದು ಭವಿಷ್ಯವನ್ನು ದೃಷ್ಟಿಯಲ್ಲಿಟ್ಟುಕೊಂಡು ಆರ್ಥಿಕ ವಹಿವಾಟನ್ನು ಆಧರಿಸಿ ಸ್ಥಳ ನಿಗದಿಯಾಗಬೇಕಾಗಿದೆ. ಕೇಂದ್ರ ಸಮಿತಿಗೆ ತುಮಕೂರು ಜಿಲ್ಲೆಯ ಶಿರಾ ಸೇರಿದಂತೆ ಪ್ರಸ್ತಾವಿತ ಸ್ಥಳಗಳನ್ನು ಪರಿಶೀಲಿಸಲು ಮನವಿ ಮಾಡಲಾಗುವುದು. ರಾಜ್ಯ ಸರ್ಕಾರ ಈವರೆಗೂ ಮೂರು ಸ್ಥಳಗಳನ್ನು ಗುರುತಿಸಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ನಿಟ್ಟೂರು ರೈಲ್ವೇ ನಿಲ್ದಾಣ ಯಾರ್ಡ್‌ನಲ್ಲಿ ೫೦ ಕೋಟಿ ೮೭ ಲಕ್ಷ ರೂಪಾಯಿ ವೆಚ್ಚದಲ್ಲಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿಗೆ ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಶಂಕುಸ್ಥಾಪನೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ತುಮಕೂರಿನಿಂದ ಗುಬ್ಬಿಯವರೆಗೆ ೪ ಪಥ ರಸ್ತೆ ನಿರ್ಮಾಣ ಮಾಡಲಾಗುವುದು ಎಂದು ಹೇಳಿದರು. ದೇಶದಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯಗಳ ನಿರ್ಮಾಣ ಹಾಗೂ ಸಾಮಾನ್ಯ ಜನರಿಗೆ ನೆರವು ನೀಡುವುದು ಪ್ರಧಾನಿ ನರೇಂದ್ರ ಮೋದಿಯವರ ಆಶಯವಾಗಿದೆ. ಇನ್ನೆರಡು ತಿಂಗಳಿನಲ್ಲಿ ಶುದ್ಧ ಕುಡಿಯುವ ನೀರನ್ನು ಒದಗಿಸುವ ಮೂಲಕ ತುಮಕೂರನ್ನು ಮಾದರಿ ಜಿಲ್ಲೆಯನ್ನಾಗಿಸಲು ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರೈಲ್ವೇ ರಸ್ತೆ ನಿರ್ಮಾಣ ವಿಭಾಗದ ಮುಖ್ಯ ಆಡಳಿತಾಧಿಕಾರಿ ಅಜೇಯ್ ಶರ್ಮಾ, ನೈರುತ್ಯ ರೈಲ್ವೆ ಮುಖ್ಯ ಅಭಿಯಂತರ ಪ್ರದೀಪ್ ಪುರಿ, ಬೆಂಗಳೂರು ವಿಭಾಗೀಯ ರೈಲ್ವೇ ವ್ಯವಸ್ಥಾಪಕ ಅಮಿತೇಶ್ ಕುಮಾರ್ ಸಿನ್ಹಾ ಮತ್ತಿತರರು ಉಪಸ್ಥಿತರಿದ್ದರು.

****************

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ ಘೋಷಿಸಿದ್ದ ೫ ಸಾವಿರದ ೩೦೦ ಕೋಟಿ ಅನುದಾನ ನೀಡದೇ ಇದ್ದರೂ ಭದ್ರಾ ಮೇಲ್ದಂಡೆ ಯೋಜನೆಗೆ ರಾಜ್ಯ ಸರ್ಕಾರ ಅಗತ್ಯ ಅನುದಾನ ನೀಡಲಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನ ಸಿದ್ದಗಂಗಾ ಮಠದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭದ್ರಾ ಮೇಲ್ದಂಡೆ ಯೋಜನೆ ರಾಷ್ಟ್ರೀಕರಣಗೊಳಿಸಿ ಕೇಂದ್ರ ಸರ್ಕಾರ ೫ ಸಾವಿರದ ೩೦೦ ಕೋಟಿ ಅನುದಾನ ಘೋಷಿಸಿದೆ. ಆದರೆ ಅನುದಾನ ಇದುವರೆಗೆ ಬಿಡುಗಡೆಯಾಗಿಲ್ಲ ಎಂದು ಹೇಳಿದ್ದಾರೆ.

ಧ್ವನಿ: ಡಾ.ಜಿ.ಪರಮೇಶ್ವರ್

ರಾಜ್ಯ ಸರ್ಕಾರ ೨ ಸಾವಿರದ ೩೦೦ ಕೋಟಿ ವೆಚ್ಚದಲ್ಲಿ ಪಾವಗಡ, ಚಳ್ಳಕೆರೆಗೆ ಕುಡಿಯುವ ನೀರು ಪೂರೈಸುವ ಯೋಜನೆ ಪೂರ್ಣಗೊಳಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶೀಘ್ರ ಯೋಜನೆ ಲೋಕಾರ್ಪಣೆ ಮಾಡಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

****************

ಬೆಲೆ ಏರಿಕೆ ಖಂಡಿಸಿ ಬಿಜೆಪಿ ನಡೆಸುತ್ತಿರುವ ಜನಾಕ್ರೋಶ ಯಾತ್ರೆಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ೧೭ ರಂದು ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಜನಾಕ್ರೋಶ ಯಾತ್ರೆ ನಡೆಸಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆಯುವ ಯಾತ್ರೆಯಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

****************

ರಾಜ್ಯ ಸರ್ಕಾರ ಯಾವ ಕ್ಷೇತ್ರಕ್ಕೂ ಅನುದಾನ ನೀಡುತ್ತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ದಕ್ಷಿಣ ಕನ್ನಡ ಜಿಲ್ಲೆಗೆ ಪ್ರವಾಸ ಕೈಗೊಳ್ಳುವುದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ, ಶಾಸಕ ಬಸವರಾಜ ರಾಯರೆಡ್ಡಿ ಸತ್ಯವನ್ನೇ ಹೇಳಿದ್ದು, ವಾಲ್ಮೀಕಿ ನಿಗಮದ ಹಗರಣ, ಮುಡಾ ಹಗರಣಗಳಿಂದ ಬೇಸತ್ತಿದ್ದಾರೆ ಎಂದು ದೂರಿದ್ದಾರೆ.

****************

ಜೈನಕಾಶಿ ಶ್ರವಣಬೆಳಗೊಳದಲ್ಲಿಂದು ಮಹಾವೀರ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ಅಭಿನವ ಚಾರುಕೀರ್ತಿ ಭಟ್ಟಾಚಾರ್ಯ ಸ್ವಾಮೀಜಿ ದಿವ್ಯ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಗಿಯಾಗಿದ್ದರು. ಅಹಿಂಸಾ ಮೂರ್ತಿ ಬಾಹುಬಲಿ ಸ್ವಾಮಿಗೆ ಪುಷ್ಪಾರ್ಚನೆ ಮೂಲಕ ಚಾಲನೆ ನೀಡಿ ಮಾತನಾಡಿದ ರಾಜ್ಯಪಾಲರು, ಸನಾತನ ಧರ್ಮ ಮತ್ತು ಜೈನ ಧರ್ಮ ಭಾರತೀಯ ಸಂಸ್ಕತಿಯ ಧರ್ಮಗಳು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಖಾತೆ ಸಚಿವ ಡಿ.ಸುಧಾಕರ್, ಉಪಸ್ಥಿತರಿದ್ದರು.

****************

ನಾಡಿನೆಲ್ಲೆಡೆ ಇಂದು ತ್ಯಾಗ, ಅಹಿಂಸೆಯ ಸಾಕಾರಮೂರ್ತಿ ಭಗವಾನ್ ಮಹಾವೀರ ಜಯಂತಿಯನ್ನು ಆಚರಿಸಲಾಯಿತು.

ಅಹಿಂಸೆ ಪರಮೋಧರ್ಮ ಎಂಬ ವಾಣಿಯೊಂದಿಗೆ ಲೋಕಕಲ್ಯಾಣಕ್ಕಾಗಿ ರಾಜನಾಗಿದ್ದ ವರ್ಧಮಾನ ರಾಜ ವೈಭವ ತೊರೆದು ಮಹಾವೀರನಾದ ಎಂದು ರಾಜ್ಯಸಭಾ ಸದಸ್ಯ ನಾರಾಯಣ ಭಾಂಡಗೆ ಬಾಗಲಕೋಟೆಯಲ್ಲಿ ತಿಳಿಸಿದ್ದಾರೆ. ಭಗವಾನ್ ಮಹಾವೀರರು ಮನುಕುಲವನ್ನು ಉದ್ಧಾರ ಮಾಡಿದ ಮಹಾನ್ ಚೇತನ ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಅಭಿಪ್ರಾಯಪಟ್ಟಿದ್ದಾರೆ. ಭಗವಾನ ಮಹಾವೀರರು ಅಹಿಂಸೆಯ ಪ್ರತಿಪಾದಕರಾಗಿದ್ದರು ಎಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮ ತಿಳಿಸಿದ್ದಾರೆ. ಅಹಿಂಸಾ ತತ್ವವನ್ನು ಜಗತ್ತಿಗೆ ಸಾರಿದವರು ಭಗವಾನ ಶ್ರೀ ಮಹಾವೀರ ಎಂದು ಗದಗ ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ್ ಹೇಳಿದ್ದಾರೆ. ಭಗವಾನ್ ಮಹಾವೀರರ ಜಯಂತ್ಯೋತ್ಸವ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು. ಜಗತ್ತಿಗೆ ಶಾಂತಿ ಹಾಗೂ ಅಹಿಂಸೆಯನ್ನು ಬೋಧಿಸಿದ ಭಗವಾನ್ ಮಹಾವೀರರ ಆದರ್ಶ, ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಜಗತ್ತಿನ ಸರ್ವತೋಮುಖ ಒಳಿತನ್ನು ಬಯಸಬೇಕು ಎಂದು ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದ್ದಾರೆ.

****************

ದಾವಣಗೆರೆ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಸಂಬಂಧ ಸಿಸಿ ಕ್ಯಾಮೆರಗಳ ಸಂಖ್ಯೆ ಹೆಚ್ಚಳಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಪೊಲೀಸ್ ಇಲಾಖೆಗೆ ಸೂಚಿಸಿದ್ದಾರೆ. ಉತ್ತಮ ಸೇವೆಗಾಗಿ ಮುಖ್ಯಮಂತ್ರಿಗಳ ಪದಕ ಪುರಸ್ಕೃತ ಪೊಲೀಸ್ ಸಿಬ್ಬಂದಿ ಅಭಿನಂಧಿಸಿ ಮಾತನಾಡಿದ ಅವರು, ಅಪರಾಧ ಪ್ರಕರಣಗಳನ್ನು ಮತ್ತಷ್ಟು ತಡೆಯಲು ಸ್ಮಾರ್ಟ್‌ಸಿಟಿ ಹಾಗೂ ಪಾಲಿಕೆ ವತಿಯಿಂದ ಹೆಚ್ಚುವರಿ ಸಿಸಿ ಕ್ಯಾಮರಗಳನ್ನು ಅಳವಡಿಸಲು ನಿರ್ದೇಶನ ನೀಡಿದ್ದಾರೆ.

****************

ಹಾವೇರಿ ಜಿಲ್ಲೆಯಲ್ಲಿರುವ ೧೭ ಗ್ರಾಮ ಪಂಚಾಯಿತಿ ವ್ಯಾಪ್ತಿಯ ೧೮ ಗ್ರಾಮಗಳಿಗೆ ೨೧ ಬಾಡಿಗೆ ಕೊಳವೆಬಾವಿಗಳಿಂದ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

****************

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ. ಐಪಿಎಲ್ ಪಂದ್ಯ ನಡೆಯುತ್ತಿರುವ ಹಿನ್ನೆಲೆಯಲ್ಲಿ ಮೆಟ್ರೋ ರೈಲು ಸೇವೆಯ ಸಮಯವನ್ನು ರಾತ್ರಿ ೧೨.೩೦ರ ವರೆಗೆ ವಿಸ್ತರಿಸಲಾಗಿದೆ. ನಾಡಪ್ರಭು ಕೆಂಪೇಗೌಡ ನಿಲ್ದಾಣದಿಂದ ನಾಲ್ಕು ದಿಕ್ಕುಗಳ ಕಡೆಗೆ ಕೊನೆಯ ರೈಲು ಮಧ್ಯರಾತ್ರಿ ೧.೧೫ಕ್ಕೆ ಹೊರಡಲಿದೆ.

****************

ರಾಜ್ಯದ ಕರಾವಳಿ ಹಾಗೂ ಒಳನಾಡಿನ ಒಂದೆರೆಡು ಕಡೆ ಮಳೆಯಾಗಿದೆ. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳ ಕೆಲವೆಡೆ ಮುಂದಿನ ೫ ದಿನಗಳ ಕಾಲ ಗುಡುಗು, ಮಿಂಚು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಬೆಂಗಳೂರಿನಲ್ಲಿ ಇಂದು ಮತ್ತು ನಾಳೆ ಹಗುರ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿ ಅತಿ ಹೆಚ್ಚು ಉಷ್ಣಾಂಶ ವಿಜಯಪುರದಲ್ಲಿ ೩೮.೫ ಡಿಗ್ರಿ ಸೆಲ್ಷಿಯಸ್ ದಾಖಲಾಗಿದೆ.

********ಮುಕ್ತಾಯ*******